**ದಿನಾಂಕ: 05.12.2020 ರಂದು 11-00 ಗಂಟೆಗೆ ಶ್ರೀ ಹೆಚ್. ನಾಗರಾಜಪ್ಪ, ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್-177 (ಜೆ.ಪಿ.ನಗರ) ನಡೆದ ಸಭೆಯ ನಡಾವಳಿಗಳು:**

## : ಚರ್ಚೆಯಾದ ವಿಷಯಗಳು :

1. ವಾರ್ಡ್-177ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ ಅಭಿವೃದ್ಧಿ ಕಾಮಗಾರಿಗಳು ಹಾಗೂ ಘನತ್ಯಾಜ್ಯ ನಿರ್ವಹಣೆ ಮತ್ತು ಕೊವಿಡ್-19ರ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

## : ಸಭೆಗೆ ಹಾಜರಾಗಿದ್ದವರ ವಿವರಗಳು :

| | |
|---|---|
| **ಅಧ್ಯಕ್ಷರು** | ನೋಡಲ್ ಅಧಿಕಾರಿ |
| **ಸದಸ್ಯ ಕಾರ್ಯದರ್ಶಿ** | ವಾರ್ಡ್ 177ರ ಸಹಾಯಕ ಅಭಿಯಂತರರು |
| **ಸದಸ್ಯರುಗಳು** | ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು |
| **ಸದಸ್ಯರುಗಳು** | ಬಿಡಬ್ಲ್ಯೂಎಸ್‌ಎಸ್‌ಬಿ ಅಭಿಯಂತರರು |
| **ಸದಸ್ಯರುಗಳು** | ಜೆ.ಪಿ.ನಗರ ಸಹಾಯಕ ಕಂದಾಯ ಅಧಿಕಾರಿಗಳು |
| **ಸದಸ್ಯರುಗಳು** | ತೋಟಗಾರಿಕಾ ಅಧೀಕ್ಷಕರು (ದಕ್ಷಿಣ) |
| **ಸದಸ್ಯರುಗಳು** | ಬೆಸ್ಕಾಂ ಅಧಿಕಾರಿಗಳು |
| **ಸದಸ್ಯರುಗಳು** | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ರೋಡ್ ಇನ್‌ಫ್ರಾ) |
| **ಸದಸ್ಯರುಗಳು** | ಕಂದಾಯ ಪರಿವೀಕ್ಷಕರು, ವಾರ್ಡ್ 177 |
| **ಸದಸ್ಯರುಗಳು** | ಅರಣ್ಯ ಸಂರಕ್ಷಣಾಧಿಕಾರಿಗಳು |
| **ಸಾರ್ವಜನಿಕರು** | ಶಕೀಲಾ ಭಾನು RWA (WOW) |
| **ಸಾರ್ವಜನಿಕರು** | ಸುನೀಲ್ |
| **ಸಾರ್ವಜನಿಕರು** | ಎ.ಆರ್. ಸುಬ್ರಮಣ್ಯಂ |
| **ಸಾರ್ವಜನಿಕರು** | ಎನ್.ಆರ್. ಬಾಬು |
| **ಸಾರ್ವಜನಿಕರು** | ಮೋಹನ್ |
| **ಸಾರ್ವಜನಿಕರು** | ಎಂ. ಶ್ರೀಕಾಂತ್ |
| **ಸಾರ್ವಜನಿಕರು** | ಎಂ.ವಿ. ಕೆಂಪೇಗೌಡ |
| **ಸಾರ್ವಜನಿಕರು** | ಕೆ.ಎನ್. ನರೇಂದ್ರ |

## :ನಡಾವಳಿಯ ವರದಿ:

- ಸದಸ್ಯ ಕಾರ್ಯದರ್ಶಿಗಳಾದ ಶ್ರೀ ರಾಮು .ಎಸ್, ಸಹಾಯಕ ಅಭಿಯಂತರರು, ಜೆ.ಪಿ.ನಗರ ಉಪವಿಭಾಗರವರು ಮಾತನಾಡುತ್ತಾ ಸಭೆಗೆ ಹಾಜರಾದ ವಾರ್ಡ್ ಸಮಿತಿಯ ಮಾನ್ಯ ಅಧ್ಯಕ್ಷರು ಹಾಗೂ ಸಾರ್ವಜನಿಕರಿಗೆ ಹಾಗೂ ಪಾಲಿಕೆಯ ಮತ್ತು ಎಲ್ಲಾ ಇಲಾಖೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

- ಅಧ್ಯಕ್ಷರು ಮಾತನಾಡುತ್ತಾ ಎಲ್ಲರಿಗೂ ಸ್ವಾಗತ ಕೋರುತ್ತಾ ಯಾವುದೇ ರೀತಿಯ ದೂರುಗಳು ಬರದಂತೆ ಅಧಿಕಾರಿಗಳು ಕ್ರಮವಹಿಸಬೇಕೆಂದು ಸೂಚಿಸಿ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿದರು. ಹಾಗೂ ಈ ಹಿಂದಿನ ಸಭೆಯಲ್ಲಿ ಚರ್ಚಿಸಿದ ವಿಷಯಗಳಿಗೆ ಕ್ರಮ ಕೈಗೊಂಡ ಬಗ್ಗೆ ಚರ್ಚಿಸಿದರು.

***ಪು.ತಿ.ನೋ***

**<u>ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.</u>**

- ಜೆ.ಪಿ.ನಗರ 3ನೇ ಹಂತ, ಮಿನಿ ಫಾರೆಸ್ಟ್ ಪಾರ್ಕಿನ ಸುತ್ತಮುತ್ತಲು ಸೊಳ್ಳೆ ನಿಯಂತ್ರಕಗಳನ್ನು ಸಿಂಪಡಿಸಲು ಹಾಗೂ ಬೀದಿ ಬದಿ ವ್ಯಾಪಾರಿಗಳಿಗೆ ತಳ್ಳುವ ಗಾಡಿಗಳನ್ನು ರಸ್ತೆಯಲ್ಲಿ ನಿಲ್ಲಿಸದಂತೆ ತಿಳಿಸಲು ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

- 7ನೇ ಮುಖ್ಯರಸ್ತೆ, ಜೆ.ಪಿ.ನಗರ 3ನೇ ಹಂತ, ಬಿಡಬ್ಲ್ಯೂಎಸ್ಎಸ್‌ಬಿ ವಾಟರ್ ಟ್ಯಾಂಕ್ ಹಿಂಭಾಗದಲ್ಲಿರುವ ಶೌಚಾಲಯದ ನಿರ್ಮಾಣಕ್ಕೆ ಸಾರ್ವಜನಿಕರು ಕೋರಿರುತ್ತಾರೆ ಹಾಗೂ ಸದರಿ ಸ್ಥಳದಲ್ಲಿ ಸ್ವಚ್ಛತೆ ಕಾಪಾಡಲು ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

- 4ನೇ ಅಡ್ಡರಸ್ತೆಯಲ್ಲಿ ಒಣಗಿರುವ ಮರಗಳನ್ನು ತೆರವುಗೊಳಿಸುವ ಬಗ್ಗೆ ಚರ್ಚಿಸಲಾಯಿತು.

- ಸಿನಿಯರ್ ಸಿಟಿಜನ್ ಪಾರ್ಕ್‌ನ ಒಳಗಡೆ ಕಸದ ಬುಟ್ಟಿಗಳನ್ನು ಹಾಗೂ Composte Unit ಗಳನ್ನು ಇಡುವಂತೆ ಯೋಜನೆ (ದ) ರವರಿಗೆ ಸೂಚಿಸಲಾಯಿತು.

- 9ನೇ ಅಡ್ಡರಸ್ತೆ, 22ನೇ ಮುಖ್ಯರಸ್ತೆ ಟ್ರಾನ್ಸ್‌ಫಾರ್ಮರ್ ಬಳಿ ಸಾರ್ವಜನಿಕರ ಶೌಚಾಲಯ ನಿರ್ಮಿಸಲು ಸಾರ್ವಜನಿಕರು ಕೋರಿರುತ್ತಾರೆ.

- ಬೃಹತ್ ಮಳೆ ನೀರುಗಾಲುವೆ ಬಳಿಗಳಲ್ಲಿ ಆಗಿಂದಾಗ್ಗೆ ಫ್ಲಾಗಿಂಗ್ ಮಾಡಲು ಕೋರಿದರು.

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಹಾಗೂ ಮೂರನೇ ಶನಿವಾರ ಬೆಳಿಗ್ಗೆ 11.30 ಘಂಟೆಗೆ ಇದೇ ರೀತಿಯಾಗಿ ಮಾಸಿಕ 2 ಬಾರಿ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಹಾಜರಾಗುವಂತೆ ಹಾಗೂ ಈ ಸಭೆಯಲ್ಲಿ ತಿಳಿಸಿರುವ ಸಮಸ್ಯೆಗಳನ್ನು ಬಗೆಹರಿಸಲು ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ರಾಮು .ಎಸ್ ರವರು ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(signature) Nagaraj. M.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು
ವಾರ್ಡ್ ಸಮಿತಿ, ವಾರ್ಡ್ ನಂ. 177
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ